**<u>ಕರ್ನಾಟಕ ಸರ್ಕಾರ</u>**

ಸಂಖ್ಯೆ: ಗ್ರಾಅಪ 59 ಗ್ರಾಪಂಅ 2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17-01-2020

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತಿಯ,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

**ವಿಷಯ:** ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) 2020 ಕಾರ್ಯಕ್ರಮವನ್ನು 19ನೇ ಜನವರಿ 2020 ರಂದು ನಡೆಸುವ ಕುರಿತು.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಪತ್ರ ಸಂಖ್ಯೆ:ಆಕುಕ 02 ಪ್ರಕಾ 2020 ದಿನಾಂಕ:3-1-2020.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಪ್ರತಿ ವರ್ಷದಂತೆ ಈ ವರ್ಷವೂ ಸಹ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) 2020 ಕಾರ್ಯಕ್ರಮವನ್ನು 19ನೇ ಜನವರಿ 2020 ರಂದು ನಡೆಸುವಂತೆ ಭಾರತ ಸರ್ಕಾರದಿಂದ ಪತ್ರ ಬಂದಿರುತ್ತದೆ. ಸದರಿ ದಿನಾಂಕದಂದು ರಾಜ್ಯದಲ್ಲಿ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) 2020 ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಸಹಕಾರ ನೀಡುವಂತೆ ಕೋರಿರುತ್ತಾರೆ.

ಭಾರತ ಸರ್ಕಾರದ ನಿರ್ದೇಶನದಂತೆ ಮುಂಬರುವ 19ನೇ ಜನವರಿ 2020 ರಲ್ಲಿ ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮ ಬಿಓಪಿವಿ ನೀಡುವುದರ ಮೂಲಕ ನಡೆಸಲಾಗುವುದು. ಕಾರ್ಯಕ್ರಮದ ಮೊದಲನೇ ದಿನ ಪೋಲಿಯೋ ಬೂತ್‌ಗಳಲ್ಲಿ ಹಾಗೂ ನಂತರ 2-3 ದಿನಗಳಲ್ಲಿ ಮನೆ-ಮನೆ ಭೇಟಿಯ ಮೂಲಕ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ನೀಡುವಂತೆ ವ್ಯವಸ್ಥೆ ಮಾಡಬೇಕಾಗಿರುತ್ತದೆ.

ಮುಂದುವರೆದು, 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಕಾರ ಮಹತ್ವದ್ದಾಗಿದ್ದು, ಸದರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

- ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಪಲ್ಸ್ ಪೋಲಿಯೋ ಕಾರ್ಯಕ್ರಮ ಅನುಷ್ಠಾನ ಸಮಿತಿ ರಚಿಸುವುದು.
- ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಇರುವ ಗ್ರಾಮಗಳು, ಲಸಿಕೆ ನೀಡುವ ಸ್ಥಳ ಹಾಗೂ ದಿನಾಂಕವನ್ನು ಕರಪತ್ರದಲ್ಲಿ ಮುದ್ರಿಸಿ ವಿತರಿಸುವುದು.
- ಗ್ರಾಮ ಪಂಚಾಯತಿಗಳ ಮೂಲಕ ಪ್ರತಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಟಾಂ ಟಾಂ ಮೂಲಕ ಲಸಿಕಾ ದಿನಾ ಹಾಗೂ ಸ್ಥಳವನ್ನು ಪ್ರಚಾರ ಮಾಡುವುದು.
- ಪಂಚಾಯತಿ ಕಾರ್ಯದರ್ಶಿಗಳು ಲಸಿಕಾ ದಿನ, ಲಸಿಕಾ ಕೇಂದ್ರಕ್ಕೆ 0-5 ವರ್ಷದೊಳಗಿನ ಮಕ್ಕಳನ್ನು ಕರೆತರುವ ವ್ಯವಸ್ಥೆಯನ್ನು ಮಾಡುವುದು.

- ಗ್ರಾಮ ಪಂಚಾಯಗಳ ವ್ಯಾಪ್ತಿಯಲ್ಲಿ ಇರುವ ಲಸಿಕಾ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಊಟದ ವ್ಯವಸ್ಥೆ ಮಾಡುವುದು.
- ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ತಮ್ಮ ಕ್ಷೇತ್ರದಲ್ಲಿ ಹಾಜರಿದ್ದು ಕಾರ್ಯಕ್ರಮದ ಅನುಷ್ಠಾನದ ಉಸ್ತುವಾರಿ ವಹಿಸಿಕೊಳ್ಳಲು ಮನವಿ ಮಾಡಿಕೊಳ್ಳುವುದು.

ಆದುದರಿಂದ ಮೇಲ್ಕಂಡಂತೆ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) 2020 ಕಾರ್ಯಕ್ರಮವನ್ನು 19ನೇ ಜನವರಿ 2020 ರಂದು ನಡೆಸಲು ಎಲ್ಲಾ ತಾಲ್ಲೂಕು ಪಂಚಾಯತಿಗಳು ಮತ್ತು ಗ್ರಾಮ ಪಂಚಾಯತಿಗಳು ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

B. Naveenkumar 17/01/2020.
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ.) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ: ಅಗತ್ಯ ಕ್ರಮಕ್ಕಾಗಿ**

1) ಎಲ್ಲಾ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು/ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.
3) ಸಂಪಾದಕರು, ಕರ್ನಾಟಕ ವಿಕಾಸ/ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಜಾವೇದ್ ಅಖ್ತರ್, ಭಾ.ಆ.ಸೇ.,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ದೂರವಾಣಿ : 080-22255324
080-22034234
ಫ್ಯಾಕ್ಸ್ : 080-22353916
ಇ-ಮೇಲ್: prs-hfw@karnataka.gov.in
ಕೊಠಡಿ ಸಂಖ್ಯೆ: 105, ಮೊದಲನೇ ಮಹಡಿ
ವಿಕಾಸ ಸೌಧ, ಡಾ: ಬಿ.ಆರ್. ಅಂಬೇಡ್ಕರ್ ವೀಧಿ
ಬೆಂಗಳೂರು-560 001

ಅ.ಸ ಪತ್ರ ಸಂಖ್ಯೆ: ಆಕುಕ 02 ಪ್ರಕಾ 2020

ದಿನಾಂಕ:3.1.2020

ಪ್ರಿಯ ಶ್ರೀಮತಿ ಉಮಾರವರೆ,

ವಿಷಯ: ರಾಷ್ಟ್ರೀಯ ಲಸಿಕಾ ದಿನ(ಪಲ್ಸ್ ಪೋಲಿಯೋ) 2020 ಕಾರ್ಯಕ್ರಮವನ್ನು 19ನೇ ಜನವರಿ 2020ರಂದು ನಡೆಸುವ ಕುರಿತು.

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಪ್ರತಿ ವರ್ಷದಂತೆ ಈ ವರ್ಷವೂ ಸಹ ರಾಷ್ಟ್ರೀಯ ಲಸಿಕಾ ದಿನ(ಪಲ್ಸ್ ಪೋಲಿಯೋ)2020 ಕಾರ್ಯಕ್ರಮವನ್ನು 19ನೇ ಜನವರಿ 2020ರಂದು ನಡೆಸುವಂತೆ ಭಾರತ ಸರ್ಕಾರದಿಂದ ಪತ್ರ ಬಂದಿರುತ್ತದೆ. ಸದರಿ ದಿನಾಂಕದಂದು ರಾಜ್ಯದಲ್ಲಿ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) 2020 ಕಾರ್ಯಕ್ರಮನ್ನು ಯಶಸ್ವಿಯಾಗಿ ನಡೆಸಲು ಸಹಕಾರ ನೀಡುವಂತೆ ತಮ್ಮಲ್ಲಿ ಕೋರಿದೆ.

**ಈ ವರ್ಷ ಡಿಸೆಂಬರ್ 10ರ ವರೆಗೆ ಕೇವಲ** ಎರಡು ದೇಶಗಳು **(ಪಾಕಿಸ್ತಾನ ಮತ್ತು ಆಫ್ಘಾನಿಸ್ತಾನ)** ಮಾತ್ರ ಪೋಲಿಯೋ ಪೀಡಿತ ರಾಷ್ಟ್ರಗಳ ಪಟ್ಟಿಯಲ್ಲಿವೆ. ವಿಶ್ವದಾದ್ಯಂತ ಒಟ್ಟಾರೆ 2018ರಲ್ಲಿ 33 ಪೋಲಿಯೊ ಪ್ರಕರಣಗಳು ಕಂಡುಬಂದಿದ್ದು, 2019ರಲ್ಲಿ 125 ಪ್ರಕರಣಗಳು ವರದಿಯಾಗಿವೆ. ಪಾಕಿಸ್ತಾನ(111) ಮತ್ತು ಆಫ್ಘಾನಿಸ್ತಾನದಲ್ಲಿ(24) ಪೋಲಿಯೊ ಪ್ರಕರಣಗಳು ಹೆಚ್ಚಾಗಿರುವುದು ಆತಂಕಕಾರಿಯಾಗಿವೆ.

ನೆರೆ ರಾಷ್ಟಗಳಾದ ಪಾಕಿಸ್ತಾನ ಮತ್ತು ಆಫ್ಘಾನೀಸ್ತಾನದಲ್ಲಿ ಪೋಲಿಯೊ ಪ್ರಕರಣಗಳು ಕಂಡು ಬಂದಿರುವುದರಿಂದ ವಲಸಿಗರ ಮೂಲಕ ನಮ್ಮ ದೇಶಕ್ಕೆ ಹರಡುವ ಸಾಧ್ಯತೆಯಿರುವುದರಿಂದ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ, ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ ಹಾಗೂ ಎ.ಎಫ್.ಪಿ(AFP-Acute Flaccid Paralysis) ಸರ್ವೇಕ್ಷಣೆ ಕಾರ್ಯಕ್ರಮಗಳನ್ನು ಅತ್ಯಂತ ಜಾಗರೂಕತೆಯಿಂದ ಮತ್ತು ಜವಾಬ್ದಾರಿಯುತವಾಗಿ ನಿರ್ವಹಿಸಬೇಕಾಗಿರುತ್ತದೆ.

ಭಾರತದಲ್ಲಿ ಕೊನೆಯ ಪೋಲಿಯೋ ಪ್ರಕರಣ 2011 ಜನವರಿಯಲ್ಲಿ ಕಂಡುಬಂದಿದ್ದು, 2014ರಲ್ಲಿ ವಿಶ್ವ ಆರೋಗ್ಯ ಸಂಸ್ಥೆಯಿಂದ ಪೋಲಿಯೋ ನಿರ್ಮೂಲನೆ ಪ್ರಮಾಣ ಪತ್ರ ದೊರೆತಿದೆ. ಕರ್ನಾಟಕದಲ್ಲಿ ಕೊನೆಯ ಪೋಲಿಯೋ ಪ್ರಕರಣ **ದಿನಾಂಕ:03-11-2007** ರಂದು ರಾಜ್ಯಕ್ಕೆ ವಲಸೆ ಬಂದಿರುವ ಗುಂಪಿನಲ್ಲಿ ಪತ್ತೆಯಾಗಿದ್ದು, ಆ ನಂತರ ಇಲ್ಲಿಯವರೆಗೆ ಯಾವುದೇ ಪೋಲಿಯೋ ಪ್ರಕರಣ ಪತ್ತೆಯಾಗಿರುವುದಿಲ್ಲ. **ಪೋಲಿಯೋ ಖಾಯಿಲೆ ನಿರ್ಮೂಲನೆ ಮಾಡಲು ಹಲವಾರು ಇಲಾಖೆಗಳ ಅಧಿಕಾರಿಗಳು, ನೌಕರರು, ಸ್ವಯಂ ಸೇವಕರು ಸಮುದಾಯದ ಸಹಭಾಗಿತ್ವದೊಂದಿಗೆ ಸಾಕಷ್ಟು ಉತ್ತಮ ಕೆಲಸ ನಿರ್ವಹಿಸುತ್ತಿರುವುದು ಪ್ರಶಂಸನೀಯವಾಗಿರುತ್ತದೆ.**

**ಭಾರತ ಸರ್ಕಾರದ ನಿರ್ದೇಶನದಂತೆ ಮುಂಬರುವ 19ನೇ ಜನವರಿ 2020ರಲ್ಲಿ ಒಂದು ಸುತ್ತಿನ ಪಲ್ಸ್ ಪೋಲಿಯೋ ಕಾರ್ಯಕ್ರಮ bOPV ನೀಡುವುದರ ಮೂಲಕ ನಡೆಸಲಾಗುವುದು. ಕಾರ್ಯಕ್ರಮದ ಮೊದಲನೇ ದಿನ ಪೋಲಿಯೊ ಬೂತ್‌ಗಳಲ್ಲಿ ಹಾಗೂ ನಂತರದ 2 – 3 ದಿನಗಳಲ್ಲಿ ಮನೆ-ಮನೆ ಭೇಟಿಯ ಮೂಲಕ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ನೀಡುವಂತೆ ವ್ಯವಸ್ಥೆ ಮಾಡಬೇಕಾಗಿರುತ್ತದೆ.**

ಮಾರ್ಚ್ 2019ರಲ್ಲಿ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸಿದರೂ ಕೆಲವು ನ್ಯೂನತೆಗಳು ಮೇಲ್ವಿಚಾರಣೆಯಲ್ಲಿ ಕಂಡುಬಂದಿರುತ್ತವೆ.

- ಒಟ್ಟಾರೆ ಪೋಲಿಯೋ ಹನಿಯಿಂದ ವಂಚಿತರಾದ ಪ್ರತಿಶತ ಮಕ್ಕಳ ಪ್ರಮಾಣ 1.61% (ವಿವಿಧ ಜಿಲ್ಲೆಗಳಲ್ಲಿ, ವಿವಿಧ ಪ್ರಮಾಣಗಳಲ್ಲಿ).
- ಬಿಟ್ಟು ಹೋದ ಮಕ್ಕಳ ಪ್ರಮಾಣವೂ ವಲಸಿಗ ಸಮುದಾಯದಲ್ಲಿಯೇ ಹೆಚ್ಚಾಗಿದ್ದು, ಅದು 2.12% ದಷ್ಟಿರುತ್ತದೆ. ಅಲ್ಲದೇ.
- ಪೋಲಿಯೋ ಹನಿ ನೀಡಲು ವಿವಿಧ ಕಾರಣಗಳಿಂದ ಬಿಟ್ಟುಹೋದ ಮನೆಗಳು 2.64% (ರಾಜ್ಯ).

ಕಾರ್ಯಕ್ರಮ ಆಯೋಜನೆಯನ್ನು ಕಟ್ಟೆಚ್ಚರದಿಂದ ನಿರ್ವಹಿಸಬೇಕಾಗಿದ್ದು, ಯಾವುದೇ ಲೋಪ-ದೋಷಗಳಿಗೆ ಎಡೆ ಇಲ್ಲದಂತೆ ವ್ಯವಸ್ಥಿತವಾಗಿ ನಿರ್ವಹಿಸಿ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಲು ತಮ್ಮ ಇಲಾಖೆಯ ಸಹಕಾರ ಮಹತ್ವದ್ದಾಗಿರುತ್ತದೆ. ಆದ್ದರಿಂದ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಕೋರಿದೆ.

- ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಪಲ್ಸ್ ಪೋಲಿಯೋ ಕಾರ್ಯಕ್ರಮ ಅನುಷ್ಠಾನ ಸಮಿತಿ ರಚಿಸುವುದು.
- ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇರುವ ಗ್ರಾಮಗಳು, ಲಸಿಕೆ ನೀಡುವ ಸ್ಥಳ ಹಾಗೂ ದಿನಾಂಕವನ್ನು ಕರಪತ್ರದಲ್ಲಿ ಮುದ್ರಿಸಿ ವಿತರಿಸುವುದು.
- ಗ್ರಾಮ ಪಂಚಾಯಿತಿಗಳ ಮೂಲಕ ಪ್ರತಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಟಾಂ ಟಾಂ ಮೂಲಕ ಲಸಿಕಾ ದಿನಾ ಹಾಗೂ ಸ್ಥಳವನ್ನು ಪ್ರಚಾರ ಮಾಡುವುದು.
- ಪಂಚಾಯಿತಿ ಕಾರ್ಯದರ್ಶಿಗಳು ಲಸಿಕಾ ದಿನ, ಲಸಿಕಾ ಕೇಂದ್ರಕ್ಕೆ 0-5 ವರ್ಷದೊಳಗಿನ ಮಕ್ಕಳನ್ನು ಕರೆತರುವ ವ್ಯವಸ್ಥೆಯನ್ನು ಮಾಡುವುದು.
- ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇರುವ ಲಸಿಕಾ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಊಟದ ವ್ಯವಸ್ಥೆ ಮಾಡುವುದು.
- ಗ್ರಾಮ ಪಂಚಾಯಿತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ತಮ್ಮ ಕ್ಷೇತ್ರದಲ್ಲಿ ಹಾಜರಿದ್ದು ಕಾರ್ಯಕ್ರಮದ ಅನುಷ್ಠಾನದ ಉಸ್ತುವಾರಿ ವಹಿಸಿಕೊಳ್ಳಲು ಮನವಿ ಮಾಡಿಕೊಳ್ಳುವುದು.

ಶುಭಾಶಯಗಳೊಂದಿಗೆ,

ತಮ್ಮ ವಿಶ್ವಾಸಿ,

8/1/21

ಶ್ರೀಮತಿ ಉಮಾ ಮಹದೇವನ್, ಭಾಆಸೇ,
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ (ಪಂಚಾಯತ್ ರಾಜ್)
ಬಹುಮಹಡಿಗಳ ಕಟ್ಟಡ, ಬೆಂಗಳೂರು.